**<u>ದಿನಾಂಕ 27.04.2026 ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.</u>**

**<u>ಮುಖ್ಯ ವಿಚಾರಣೆ: ಅರ್ಜಿದಾರರ ಪರ ಮಾನ್ಯ ವಕೀಲರಿಂದ.</u>**

ನನ್ನ ಮುಖ್ಯ ವಿಚಾರಣಾ ಸಾಕ್ಷ್ಯವನ್ನು ಪ್ರಮಾಣ ಪತ್ರದ ರೂಪದಲ್ಲಿ ಸಲ್ಲಿಸಿದ್ದೇನೆ. ಅದರಲ್ಲಿರುವ ವಿಚಾರಗಳನ್ನು ನಾನೇ ಹೇಳಿ ಬರೆಯಿಸಿ ರುಜು ಮಾಡಿದ್ದು ಅದರಲ್ಲಿರುವ ವಿಚಾರಗಳು ಸತ್ಯವಾಗಿವೆ.

ಅಧಿಕಾರ ಪತ್ರವನ್ನು **ನಿಪಿ 20** ಎಂದು, ಎರಡು ಕೇಸ್ ಶೀಟ್ ಗಳನ್ನು **ನಿಪಿ 21** ಎಂದು, ಕ್ಷ-ಕಿರಣಗಳನ್ನು **ನಿಪಿ 22** ಎಂದು ಗುರುತಿಸಲಾಯಿತು.

**<u>ಪಾಟೀ ಸವಾಲು: 1ನೇ ಎದುರುದಾರರ ಪರ ಮಾನ್ಯ ವಕೀಲರಿಂದ.</u>**

ಅರ್ಜಿದಾರರನ್ನು ಬೇರೆ ಆಸ್ಪತ್ರೆಯಿಂದ ನಮ್ಮ ಆಸ್ಪತ್ರೆಗೆ ಶಿಫಾರಸ್ಸು ಮಾಡಿದ ಬಗ್ಗೆ ನನಗೆ ಗೊತ್ತಿಲ್ಲ. ನಿಪಿ 21 ರಲ್ಲಿ ಸಹಿ ಮತ್ತು ಮೊಹರು ಇಲ್ಲ ಎಂದರೆ ಸರಿಯಲ್ಲ. ಸದರಿ ದಾಖಲಾತಿಯಲ್ಲಿ ಕ್ರಮವಾಗಿ ಜೋಡಣೆ ಮಾಡಿಲ್ಲ ಎಂದರೆ ಸರಿಯಲ್ಲ. ನಿಪಿ 21 ಮತ್ತು 22 ರ ಬಗ್ಗೆ ನನಗೆ ಮಾಹಿತಿ ಇಲ್ಲ ಮತ್ತು ನಾನು ಅವುಗಳನ್ನು ಸೃಷ್ಟಿಸಿ ಹಾಜರುಪಡಿಸಿರುತ್ತೇನೆ ಎಂದರೆ ಸರಿಯಲ್ಲ. ಅರ್ಜಿದಾರರಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

2ನೇ ಎದುರುದಾರರ ಪರ ಮಾನ್ಯ ವಕೀಲರು ಗೈರು ಹಾಜರಾದ ಕಾರಣ ಪಾಟೀ ಸವಾಲು ಏನೂ ಇಲ್ಲ ಎಂದು ತೆಗೆದುಕೊಳ್ಳಲಾಯಿತು.

**(ನನ್ನ ಉಕ್ತಲೇಖನದಂತೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಿಸಲ್ಪಟ್ಟಿದೆ).**

**(ಓ.ಹೇ.ಕೇ.ಸ.ಇ.)**

**1ನೇ ಎಸ್‌ಸಿಜೆ ಮತ್ತು ಎಸಿಜೆಎಮ್**

**ಬೆಂಗಳೂರು**